# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ 1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಚೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.

ಸಂಖ್ಯೆ : ಕವಿಪ್ರನಿನಿ/ಕ.ಫ/ಸ-20510/2015-16 ದಿನಾಂಕ : 22 MAY 2018
ಲಗತ್ತು : ಏ|

## ಸುತ್ತೋಲೆ

ವಿಷಯ: **ನಿಗಮದ ವಿವಿಧ ಕಚೇರಿಗಳ ಕಡತಗಳಲ್ಲಿ ಹೊರಡಿಸುವ ಟಿಪ್ಪಣಿಗಳು ಮತ್ತು ಕಡತಗಳಲ್ಲಿ ಕನ್ನಡದ ಮೊಹರುಗಳನ್ನು ಕಡ್ಡಾಯವಾಗಿ ಬಳಸುವ ಬಗ್ಗೆ.**

ಉಲ್ಲೇಖ: ಕವಿಪ್ರನಿನಿಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ದಿನಾಂಕ: 03.01.2018 ರಂದು ನಡೆದ ಪ್ರಗತಿ ಪರಿಶೀಲನಾ ಸಭೆಯ ನಡವಳಿಗಳು.

....

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನಿಗಮದ ಕಾರ್ಯಾಲಯದಿಂದ ಕನ್ನಡ ಅನುಷ್ಠಾನದ ಕುರಿತು ಹೊರಡಿಸಿರುವ ಸುತ್ತೋಲೆಗಳ ಕಡೆಗೆ ಗಮನವನ್ನು ಕೋರಿದೆ. ಸದರಿ ಸುತ್ತೋಲೆಗಳಲ್ಲಿ ನಿಗಮದ ಆಡಳಿತದಲ್ಲಿ ಎಲ್ಲ ಹಂತದಲ್ಲೂ ಕಡ್ಡಾಯವಾಗಿ ಸಂಪೂರ್ಣ (ಶೇ. 100 ರಷ್ಟು ) ವಾಗಿ ಕನ್ನಡ ಭಾಷೆಯನ್ನು ಅನುಷ್ಠಾನಗೊಳಿಸಲು ಸೂಚಿಸಲಾಗಿದೆ.

ಕವಿಪ್ರನಿನಿಯ ನಿಗಮ ಕಾರ್ಯಾಲಯದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಹಾಗೂ ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ರವರ ಉಪಸ್ಥಿತಿಯಲ್ಲಿ ದಿನಾಂಕ: 03.01.2018 ರಂದು ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ, **"ನಿಗಮದ ವಿವಿಧ ಕಚೇರಿಗಳ ಕಡತಗಳಲ್ಲಿ ಕೆಲವೊಂದು ಟಿಪ್ಪಣಿಗಳು ಮತ್ತು ಕೆಲವೊಂದು ಕಡತಗಳಲ್ಲಿ ಆಂಗ್ಲ ಭಾಷೆಯ ಮೊಹರುಗಳನ್ನು ಬಳಸುವುದು ಕಂಡು ಬಂದಿದ್ದು, ಕೂಡಲೇ ಅವುಗಳನ್ನು ಸರಿಪಡಿಸಿಕೊಳ್ಳುವುದು"** ಎಂದು ಸೂಚಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ರಾಜ್ಯದ ಆದ್ಯಂತ ನಿಗಮದ ಎಲ್ಲಾ ಕಚೇರಿಗಳಲ್ಲಿ ಹೊರಡಿಸುವ ಟಿಪ್ಪಣಿಗಳನ್ನು ಕಡ್ಡಾಯವಾಗಿ ಕನ್ನಡದಲ್ಲಿಯೇ ಬರೆಯತಕ್ಕದ್ದು ಹಾಗೂ ನಿಗಮದ ವಿವಿಧ ಕಚೇರಿಗಳಲ್ಲಿ ಬಳಸುವ ಆಂಗ್ಲ ಭಾಷೆಯ ಮೊಹರುಗಳ ಬದಲಾಗಿ ಕಡ್ಡಾಯವಾಗಿ ಕನ್ನಡ ಭಾಷೆಯ ಮೊಹರುಗಳನ್ನು ಉಪಯೋಗಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ನೌಕರರ ವಿರುದ್ಧ ಮೇಲಾಧಿಕಾರಿಗಳು ವಾರ್ಷಿಕ ವೇತನ ಬಡ್ತಿ ತಡೆಹಿಡಿಯುವುದು, ವಾಗ್ದಂಡನೆ, ಪದೋನ್ನತಿಯನ್ನು ತಡೆಹಿಡಿಯುವುದು ಅಥವಾ ಕಾಲವೇತನ ಶ್ರೇಣಿಯಲ್ಲಿ ಕೆಳಗಿನ ಹಂತಕ್ಕೆ ಇಳಿಸುವ ಮುಂತಾದ ಶಿಸ್ತುಕ್ರಮಗಳನ್ನು ಜರುಗಿಸಲು ಸೂಚಿಸಲಾಗಿದೆ.

ನಿರ್ದೇಶಕರು (ಆಡಳಿತ ಮತ್ತು ಮಾ.ಸಂ.)
ಕವಿಪ್ರನಿನಿ

**ಪ್ರತಿಯನ್ನು ಮಾಹಿತಿಗಾಗಿ**

1. ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಕೊಠಡಿ ಸಂಖ್ಯೆ : 206, 2ನೇ ಮಹಡಿ, ವಿಧಾನ ಸೌಧ, ಕರ್ನಾಟಕ ಸರ್ಕಾರ ಬೆಂಗಳೂರು.
2. ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ (ಆಡಳಿತ ಕನ್ನಡ), ಬೆಂಗಳೂರು.
3. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ, ಕನಾಟಕ ಸರ್ಕಾರ, ಬೆಂಗಳೂರು.

4. ಜಂಟಿ ಕಾರ್ಯದರ್ಶಿ (ಆಡಳಿತ), ಸಾರ್ವಜನಿಕ ಉದ್ದಿಮೆಗಳ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ 2ನೇ ಹಂತ, 7ನೇ ಮಹಡಿ, ಬಹು ಮಹಡಿ ಕಟ್ಟಡ, ಬೆಂಗಳೂರು.
5. ಶ್ರೀ ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ & ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು .
6. ಶ್ರೀ ಎ.ಎನ್. ಜಯರಾಜ್, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ನೌಕರರ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
10. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತುಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಕೇಂದ್ರ ಸಮಿತಿ.
11. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜಿನಿಯರ್‌ಗಳ ಸಂಘ, ಬೆಂಗಳೂರು.

ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ**www.kptcl.com-->eprasarana**ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

**ಕರ್ನಾಟಕ ಸರ್ಕಾರದ ಸಚಿವಾಲಯ ವಿಕಾಸ ಸೌಧ ರವರ ಸುತ್ತೋಲೆಯಂತೆ ಕ್ರಮ ವಹಿಸಿ ಪ್ರತಿ ತಿಂಗಳು ಪ್ರಗತಿಯ ಕ್ರೋಢಿಕೃತ ವರದಿಯನ್ನು ನಿಗದಿತ ನಮೂನೆಯಲ್ಲಿ ಸಲ್ಲಿಸಲು ಸೂಚಿಸಿದೆ.**

1. ಎಲ್ಲಾ ಮುಖ್ಯ ಇಂಜಿನಿಯರ್ (ವಿ), ಕವಿಪ್ರನಿನಿ.
2. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ
3. ಆಡಳಿತಾಧಿಕಾರಿ (ಮಾ.ಸಂ.ಅ.ಕೇಂದ್ರ) ಹೂಡಿ, ಕವಿಪ್ರನಿನಿ, ಬೆಂಗಳೂರು-48
4. ಪ್ರಧಾನ ವ್ಯವಸ್ಥಾಪಕರು (ಸಿಬ್ಬಂದಿ), ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
5. ಉಪ ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ) ಹಾಗೂ (ಎಪಿಸಿಸಿ)
6. ಸಹಾಯಕ ಪ್ರಧಾನ ವ್ಯವಸ್ಥಾಪಕರು (ಸಿಬ್ಬಂದಿ)/ವಿಚಾರಣೆಗಳು (ಕಾನೂನು)/ನಿಗಮ ಕಾರ್ಯಾಲಯ
7. ಎಲ್ಲಾ ಅಧೀಕ್ಷಕ ಇಂಜಿನಿಯರ್ / ನಿಯಂತ್ರಣಾಧಿಕಾರಿ, ಕವಿಪ್ರನಿನಿ.
8. ಅಧೀಕ್ಷಕ ಇಂಜಿನಿಯರ್ (ಐ.ಟಿ.ಮತ್ತು ಎಂ.ಐ.ಎಸ್) ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು
9. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ / ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ.
10. ಸಾರ್ವಜನಿಕ ಸಂಪರ್ಕಾಧಿಕಾರಿ, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು ಹಾಗೂ ಸಂಬಂಧಿಸಿದ ನಿಗಮ ಕಚೇರಿಗಳ ಮುಖ್ಯಸ್ಥರು.
11. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/(ಹಣಕಾಸು)/(ಆ. ಮತ್ತು ಮಾ.ಸಂ.)/ನಿರ್ದೇಶಕರು ಮತ್ತು ಕಂಪನಿ ಕಾರ್ಯದರ್ಶಿ ರವರ ಹಿರಿಯ ಆಪ್ತ ಕಾರ್ಯದರ್ಶಿಗಳು, ಕವಿಪ್ರನಿನಿ, ಬೆಂಗಳೂರು.
12. ವ್ಯವಸ್ಥಾಪಕರು (ಔ.ಭಾ) ಶಾಖೆ, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
13. ವ್ಯವಸ್ಥಾಪಕರು (ಸಿಬ್ಬಂದಿ-1 ಮತ್ತು 2), ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು
14. ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್, ಸಾರಿಗೆ ಉಪವಿಭಾಗ, ಕವಿಪ್ರನಿನಿ ರಾಜಾಜಿನಗರ, ಬೆಂಗಳೂರು-10
15. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
16. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು/ ಕವಿಪ್ರನಿನಿ

FS No. 89367[illegible]9

M. D.
JAN 2018
KPTCL

# ದಿನಾಂಕ: ೩.೧.೨೦೧೮ ರಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪ್ರೊ.ಎಸ್.ಜಿ.ಸಿದ್ಧರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಇಲಾಖೆಯ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯ ನಡವಳಿ

ಸಭೆಯಲ್ಲಿ ಭಾಗವಹಿಸಿದವರು :

೧. ಶ್ರೀ ಜಾವೇದ್ ಅಖ್ತರ್, ಭಾ.ಆ.ಸೇ. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು.

೨. ಶ್ರೀ ಆರ್. ರಾಮಕೃಷ್ಣ, ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕ.ವಿ.ಪ್ರ.ನಿ.ನಿ., ಬೆಂ.

೩. ಪ್ರೊ.ಚಂದ್ರಶೇಖರ ಪಾಟೀಲ್, ಹಿಂದಿನ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಹಾಗು ನಾಡಿನ ಖ್ಯಾತ ಸಾಹಿತಿಗಳು.

೪. ಡಾ. ಸಿದ್ಧಲಿಂಗಯ್ಯ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಹಾಗು ದಲಿತ ಕವಿಗಳು.

೫. ಡಾ.ಕೆ.ಮುರಳಿಧರ್, ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.

೬. ಶ್ರೀ ಪ್ರಭಾಕರ್ ಪಟೇಲ್, ಸದಸ್ಯರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ.

ಮೊದಲಿಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಾದ ಡಾ.ಕೆ.ಮುರಳಿಧರ ಅವರು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸಂಕ್ಷಿಪ್ತ ಪರಿಚಯಮಾಡಿಕೊಡುತ್ತಾ ಪ್ರಗತಿ ಪರಿಶೀಲನೆಯ ಉದ್ದೇಶ ಮತ್ತು ಮಹತ್ವವನ್ನು ತಿಳಿಸಿದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪ್ರೊ. ಎಸ್.ಜಿ. ಸಿದ್ಧರಾಮಯ್ಯ, ಅವರು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ಇಲಾಖೆಯ ಅಂತರ್ಜಾಲ ತಾಣವು ಕನ್ನಡಮಯವಾಗಿದ್ದು, ಅದಕ್ಕೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಮೊದಲಿಗೆ ನಿಗಮದ ಎಲ್ಲಾರಿಗೂ ಅಭಿನಂದನೆಗಳನ್ನು ತಿಳಿಸಿದರು. ನಿಗಮದ ಕಡತಗಳ ತಲೆಭಾಗದಲ್ಲಿ ಆಂಗ್ಲ ಭಾಷೆಯ ಬಳಕೆಯನ್ನು ಗಮನಿಸಿ, ಅದನ್ನು ಕಡ್ಡಾಯವಾಗಿ ಕನ್ನಡದಲ್ಲಿ ಇರುವಂತೆ ನೋಡಿಕೊಳ್ಳಲು ತಿಳಿಸಿದರು. ಈ ಹಿಂದೆ ಕ.ವಿ.ಪ್ರ.ನಿ.ನಿ. ನಲ್ಲಿ ನಡೆದ ನೇಮಕಾತಿಯಲ್ಲಿ ಹೊರರಾಜ್ಯದ ೬೪ ಜನರಿಗೆ ಉದ್ಯೋಗವಕಾಶವನ್ನು ಕಲ್ಪಿಸಲಾಗಿತ್ತು. ಇದಕ್ಕೆ ಅವಕಾಶವಿರುವ ನಿಯಮಾವಳಿಗಳನ್ನು ಕೂಡಲೇ ತಿದ್ದುಪಡಿ ಮಾಡಿಕೊಂಡು ಮುಂದಿನ ನೇಮಕಾತಿ ಸಂದರ್ಭಗಳಲ್ಲಿ ಕಡ್ಡಾಯವಾಗಿ ಕನ್ನಡಿಗರನ್ನೇ ನೇಮಕ ಮಾಡಿಕೊಳ್ಳಲು ಅನುಕೂಲವಾಗುವಂತೆ ಕ್ರಮವಹಿಸಲು ಸೂಚಿಸಿರುವ ಬಗ್ಗೆ ಕೇಳಲಾಗಿ ಮಾನ್ಯ ನಿರ್ದೇಶಕರು, ನಿಯಮಾವಳಿಯನ್ನು ಈಗಾಗಲೇ ತಿದ್ದುಪಡಿ ಮಾಡಿರುವ ಬಗ್ಗೆ ವರದಿಯನ್ನು ನೀಡಿದರು. ಅಲ್ಲದೇ, ಈಗ ಸುಮಾರು ೨೦ ಸಾವಿರದಷ್ಟು 'ಸಿ' ಮತ್ತು 'ಡಿ' ಗ್ರೂಪ್ ಹುದ್ದೆಗಳನ್ನು ತುಂಬಿದ ನಿಗಮವು ಶೇಕಡ ೧೦೦ ರಷ್ಟು ಕನ್ನಡಿಗರನ್ನೇ ನೇಮಕ ಮಾಡಿಕೊಂಡಿರುವುದನ್ನು ನಿಗಮದ ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು. ನಿಗಮದ ಕೆಲ ಕಡತಗಳನ್ನು ಪರಿಶೀಲಿಸಲಾಗಿ ಅವುಗಳಲ್ಲಿ ಕೆಲವು ಕಡೆ ಆಂಗ್ಲ ಭಾಷೆಯ ಮೊಹರುಗಳು ಹಾಗೂ ಟಿಪ್ಪಣಿಗಳು ಕಂಡುಬಂದಿದ್ದು, ಅವುಗಳನ್ನು ಸರಿಪಡಿಸಿಕೊಳ್ಳುವಂತೆ ಸೂಚಿಸಲಾಯಿತು.

ನಾಡಿನ ಹಿರಿಯ ಸಾಹಿತಿಗಳಾದ ಶ್ರೀ ಚಂದ್ರಶೇಖರ ಪಾಟೀಲ್ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ನಿಗಮದಲ್ಲಿ ಬಹುತೇಕ ಕನ್ನಡ ಬಳಕೆ ಕಂಡುಬಂದಿದ್ದು, ಶೇಕಡ ೧೦೦ ರಷ್ಟು ಕನ್ನಡವನ್ನು ಬಳಸುವಂತೆ ತಿಳಿಸಿದರು.

ಸಭೆಯಲ್ಲಿ ಕ.ವಿ.ಪ್ರ.ನಿ.ನಿ. ಮಾನ್ಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಜಾವೇದ್ ಅಖ್ತರ್, ಪ್ರಾಧಿಕಾರದ ಸದಸ್ಯರಾದ ಪ್ರಭಾಕರ್ ಪಟೇಲ್, ಕಾರ್ಯದರ್ಶಿಗಳಾದ ಡಾ. ಕೆ. ಮುರಳೀಧರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಶ್ರೀ ಮಂಜುನಾಥ್ ಆರಾಧ್ಯ ಹಾಗೂ ಅಧ್ಯಕ್ಷರ ಆಪ್ತ ಕಾರ್ಯದರ್ಶಿಯಾದ ಡಾ. ವೀರಶೆಟ್ಟಿ ಉಪಸ್ಥಿತರಿದ್ದರು.

ಪರಿಶೀಲನೆಯಲ್ಲಿ ಹಲವಾರು ಕಡತಗಳು, ಪತ್ರಗಳು ಹಾಗು ಟಿಪ್ಪಣಿಗಳನ್ನು ಪರಿಶೀಲಿಸಲಾಗಿ ವ್ಯಕ್ತವಾದ ಅಭಿಪ್ರಾಯಗಳನ್ನು ಪರಿಗಣಿಸಿ ಈ ಕೆಳಕಂಡ ನಿರ್ಣಯಗಳನ್ನು ಕೈಗೊಳ್ಳಲಾಯಿತು.

೧. ಕನ್ನಡ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕನ್ನಡ ಘಟಕವನ್ನು ಸ್ಥಾಪಿಸಿ ಇಲಾಖೆಯಲ್ಲಿ ಕನ್ನಡ ಅನುಷ್ಠಾನ ಕುರಿತಂತೆ ಪ್ರಗತಿ ವರದಿಯನ್ನು ಕಾಲಕಾಲಕ್ಕೆ ಪ್ರಾಧಿಕಾರಕ್ಕೆ ಸಲ್ಲಿಸುವುದು. (ಕ್ರಮ : ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ)

೨. ಅಂತರ್ಜಾಲ ಮತ್ತು ಸಾಮಾಜಿಕ ತಾಣಗಳಲ್ಲಿ ಪ್ರಧಾನ ಪುಟವನ್ನು ಕಡ್ಡಾಯವಾಗಿ ಕನ್ನಡದಲ್ಲಿ ರೂಪಿಸುವುದು ಮತ್ತು ಸಂಪೂರ್ಣ ಮಾಹಿತಿಯನ್ನು ಕನ್ನಡದಲ್ಲಿಯೇ ನೀಡುವುದು. (ಕ್ರಮ : ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ)

೩. ಇಲಾಖೆಯ ವಾಹನಗಳಲ್ಲಿ ಕಡ್ಡಾಯವಾಗಿ ಆಂಗ್ಲ ಅಂಕಿಗಳ ಜೊತೆಗೆ ಕನ್ನಡ ಅಂಕಿಗಳನ್ನೂ ಬಳಸುವುದು. (ಕ್ರಮ : ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ)

೪. ಕನ್ನಡ ದಿನಪತ್ರಿಕೆಗಳಲ್ಲಿ ಆಂಗ್ಲ ಭಾಷೆಯಲ್ಲಿ ಜಾಹಿರಾತುಗಳನ್ನು ನೀಡುವುದನ್ನು ಬಿಟ್ಟು ಇನ್ನುಮುಂದೆ ಕಡ್ಡಾಯವಾಗಿ ಕನ್ನಡ ಜಾಹಿರಾತು ನೀಡುವಂತೆ ಸೂಚನೆ ನೀಡುವುದು. (ಕ್ರಮ : ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ)

೫. ಹೊರಗುತ್ತಿಗೆ ಆಧಾರದಲ್ಲಿ ನೇಮಕಾತಿ ಮಾಡಿಕೊಂಡಿರುವ ಗ್ರೂಪ್ 'ಸಿ' ಮತ್ತು ಗ್ರೂಪ್ 'ಡಿ' ನೌಕರರ ಸಂಪೂರ್ಣ ಮಾಹಿತಿಯನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸುವುದು. (ಕ್ರಮ : ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ)

೬. ಪರಿಶೀಲನೆ ಹಂತದಲ್ಲಿ ಕೆಲವೊಂದು ಟಿಪ್ಪಣಿ ಹಾಳೆಗಳು ಮತ್ತು ಕೆಲವೊಂದು ಕಡತಗಳಲ್ಲಿ ಆಂಗ್ಲ ಭಾಷೆಯ ಮೊಹರುಗಳನ್ನು ಬಳಸಿರುವುದು ಕಂಡುಬಂದಿದ್ದು ಕೂಡಲೇ ಅವುಗಳನ್ನು ಸರಿಪಡಿಸಿಕೊಳ್ಳುವುದು (ಕ್ರಮ : ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ)

೭. ೨೦೧೫ರ ಅಧಿಸೂಚನೆಯನ್ವಯ ನೇಮಕಗೊಂಡಿರುವ ಹೊರ ರಾಜ್ಯದ ೬೪ ಜನ ನೌಕರರು ಕಡ್ಡಾಯವಾಗಿ ಕನ್ನಡ ಭಾಷಾ ಪರೀಕ್ಷೆಯಲ್ಲಿ ಅನುತ್ತೀರ್ಣರಾದವರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲು ಕ್ರಮಕೈಗೊಳ್ಳುವುದು. ಉತ್ತೀರ್ಣರಾಗದ ಹೊರತು ಖಾಯಂ ಸೇವಾವಧಿ ಘೋಷಣೆ ಮಾಡದಂತೆ ಕ್ರಮವಹಿಸುವುದು. ಅಲ್ಲದೇ, ಅವರೆಲ್ಲರು ಕಡ್ಡಾಯವಾಗಿ ಕನ್ನಡದಲ್ಲಿಯೇ ವ್ಯವಹರಿಸುವಂತೆ ನೋಡಿಕೊಳ್ಳುವುದು. (ಕ್ರಮ : ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ)

೮. ಅಂತರ್ಜಾಲ ತಾಣದಲ್ಲಿ ಯುನಿಕೋಡ್ ಬಳಕೆ ಮಾಡುವುದು ಹಾಗೂ ನಿಗಮನದ ಎಲ್ಲಾ ಕಡತಗಳ ತಲೆಬರಹ ಕನ್ನಡದಲ್ಲಿರುವಂತೆ ನೋಡಿಕೊಳ್ಳುವುದು.

೯. (ಕ್ರಮ : ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ).

ಸಭೆಯಲ್ಲಿ ತೆಗೆದುಕೊಂಡ ನಿರ್ಣಯಗಳನ್ವಯ ಕ್ರಮ ಕೈಗೊಂಡು ೧೫ ದಿನಗಳ ಒಳಗಾಗಿ ಅನುಪಾಲನಾ ವರದಿಯನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸುವಂತೆ ವ್ಯವಸ್ಥಾಪಕ ನಿರ್ದೇಶಕರಿಗೆ ಸೂಚನೆ ನೀಡಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಸಭೆಯನ್ನು ಮುಕ್ತಾಯಗೊಳಿಸಿದರು.

(ಡಾ. ಕೆ. ಮುರಳಿಧರ)
ಕಾರ್ಯದರ್ಶಿ
ಕನ್ನಡ ಅಭಿವೃದ್ಧಿ ಪ್ರಾಧಿಕಾರ

(ಪ್ರೊ. ಎಸ್.ಜಿ. ಸಿದ್ಧರಾಮಯ್ಯ)
ಅಧ್ಯಕ್ಷರು
ಕನ್ನಡ ಅಭಿವೃದ್ಧಿ ಪ್ರಾಧಿಕಾರ